# ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ

ರಾಜ್ಯ ಕೇಂದ್ರ ಕಾರ್ಯಾಲಯ, #39, ಶಾಂತಿಗೃಹ, ಅರಮನೆ ರಸ್ತೆ, ಬೆಂಗಳೂರು – 560 001

ದೂ:+91-80-2226 0017;+91-80-2226 7470;+91-80-2226 1047 ಮಿಂಚಂಚೆ: info@bsgkarnataka.org ಅಂತರ್ಜಾಲ: www.bsgkarnataka.org

ಸಂಖ್ಯೆ:SHQ/State Youth Meet/158/2026-27 ದಿನಾಂಕ:30.04.2026

ಎಲ್ಲಾ ಜಿಲ್ಲಾ ಕಾರ್ಯದರ್ಶಿಗಳಿಗೆ
ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್
ಜಿಲ್ಲಾ ಸಂಸ್ಥೆ, ಕರ್ನಾಟಕ

ಮಾನ್ಯರೆ,

**ವಿಷಯ: ರಾಜ್ಯ ಯುವ ಸಮಾವೇಶಕ್ಕೆ ಜಿಲ್ಲಾ ಅಧ್ಯಕ್ಷರು ಮತ್ತು ಉಪಾಧ್ಯಕ್ಷರನ್ನು ನಿಯೋಜಿಸುವ ಬಗ್ಗೆ**

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರಾಜ್ಯ ಸಂಸ್ಥೆ ವತಿಯಿಂದ ಮಾನ್ಯ ರಾಜ್ಯ ಮುಖ್ಯ ಆಯುಕ್ತರಾದ ಡಾ॥ ಪಿ.ಜಿ.ಆರ್. ಸಿಂಧ್ಯ ಇವರ ಮಾರ್ಗದರ್ಶನದಲ್ಲಿ **ದಿನಾಂಕ: 12.05.2026 ರಿಂದ 16.05.2026ರ ವರೆಗೆ** ಕೊಂಡಜ್ಜಿ ಬಸಪ್ಪ ಸ್ಕೌಟ್-ಗೈಡ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ, ಕೊಂಡಜ್ಜಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇಲ್ಲಿ "ರಾಜ್ಯ ಯುವ ಸಮಾವೇಶ"ವನ್ನು ಆಯೋಜಿಸಲಾಗಿದೆ. ಸಮಾವೇಶದ ವಿವರಗಳು ಈ ಕೆಳಕಂಡಂತಿವೆ.

| | |
|---|---|
| ಶಿಬಿರ | ರಾಜ್ಯ ಯುವ ಸಮಾವೇಶ |
| ದಿನಾಂಕ | ದಿನಾಂಕ: **12.05.2026 ರಿಂದ 16.05.2026ರ ವರೆಗೆ** |
| ವರದಿ ಮಾಡುವ ಸ್ಥಳ | ಕೊಂಡಜ್ಜಿ ಬಸಪ್ಪ ಸ್ಕೌಟ್-ಗೈಡ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ, ಕೊಂಡಜ್ಜಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ |
| ಹಾಜರಾಗುವ ವೇಳೆ ಮತ್ತು ದಿನಾಂಕ | ದಿನಾಂಕ: 12.05.2026 ರಂದು ಸಂಜೆ 4.00 ಗಂಟೆಗೆ ಕಡ್ಡಾಯವಾಗಿ ವರದಿ ಸಲ್ಲಿಸುವುದು. |
| ಬಿಡುಗಡೆ ಮಾಡುವ ದಿನಾಂಕ | ದಿನಾಂಕ 16.05.2026 ಬೆಳಗ್ಗೆ 11.00 ಗಂಟೆಗೆ |
| ಯಾರು ಭಾಗವಹಿಸುವುದು | • ತಮ್ಮ ಜಿಲ್ಲಾ ಯುವ ಸಮಿತಿಗೆ ನೇಮಕ ಮಾಡಿರುವ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಭಾಗವಹಿಸುವುದು. (ಜಿಲ್ಲಾ ಸಮಿತಿಯಲ್ಲಿ ಒಬ್ಬರು ಪುರುಷ ಮತ್ತು ಒಬ್ಬರು ಮಹಿಳೆ ಕಡ್ಡಾಯವಾಗಿ ಭಾಗವಹಿಸಬೇಕು)<br>• ಈ ಸಮಿತಿ ಸಭೆಯ ಅಧ್ಯಕ್ಷರು & ಉಪಾಧ್ಯಕ್ಷರು ಮುಂದಿನ 3 ವರ್ಷಗಳ ಅವಧಿಗೆ ಜಿಲ್ಲಾ ಸಂಸ್ಥೆಯಲ್ಲಿ ಸೇವೆ ಸಲ್ಲಿಸಬೇಕಾಗಿವುದರಿಂದ, ಅವರುಗಳನ್ನು ಮಾತ್ರ ನಿಯೋಜಿಸುವುದು.<br>• 16 ರಿಂದ 29 ವರ್ಷದ ಒಳಗೆ ವಯೋಮಿತಿ ಇರಬೇಕು<br>• ಭಾಗವಹಿಸುವ ಅಧ್ಯಕ್ಷರು ಮತ್ತು ಉಪಾಧ್ಯಕರು ಬಿ.ಎಸ್.ಜಿ. ಯು.ಐ.ಡಿ ಕಡ್ಡಾಯವಾಗಿ ಹೊಂದಿರಬೇಕು. |
| ಪ್ರಯಾಣ ವೆಚ್ಚ | ಆಯಾಯ ಕಾಲೇಜಿನ ರೋವರ್ಸ್-ರೇಂಜರ್ಸ್ ನಿಧಿಯಿಂದ/ ಜಿಲ್ಲಾ ಸಂಸ್ಥೆಯಿಂದ ಭರಿಸುವುದು. |
| ತರಬೇಕಾದ ಸಾಮಾಗ್ರಿಗಳು | ಶಿಬಿರಕ್ಕೆ ಅವಶ್ಯಕವಿರುವ ಉಡುಪು ಮತ್ತು ಸಲಕರಣೆಗಳು. ಸಮವಸ್ತ್ರ, ಬದಲಿ ಉಡುಪು, ತಟ್ಟೆ, ಲೋಟೆ, ಹಗುರ ಹಾಗೂ ಬೆಚ್ಚನೆ ಹಾಸಿಗೆ, |

| | |
|---|---|
| | ನೂಲಿನ ಹಗ್ಗ, ಬರವಣಿಗೆ ಸಾಮಾಗ್ರಿಗಳು, ವೈಯಕ್ತಿಕ ವಸ್ತುಗಳು, ನೋಟ್ ಪುಸ್ತಕ, ಶಿಬಿರಾಗ್ನಿ ಉಡುಪು, ಲ್ಯಾಪ್‌ಟಾಪ್/ಟ್ಯಾಬ್. |
| ಆನ್‌ಲೈನ್ ನೊಂದಾವಣಿ | ಭಾಗವಹಿಸುವ ಜಿಲ್ಲಾ ಅಧ್ಯಕ್ಷರು & ಉಪಾಧ್ಯಕ್ಷರು ಈ ಲಿಂಕ್ https://zfrmz.in/LVNDkhtaWmp0bzdcu4Jv ನಲ್ಲಿ ನೊಂದಾವಣಿ ಮಾಡಿಕೊಳ್ಳುವುದು. |
| ಊಟ ಮತ್ತು ವಸತಿ ವ್ಯವಸ್ಥೆ | ರಾಜ್ಯ ಸಂಸ್ಥೆಯ ವತಿಯಿಂದ ವ್ಯವಸ್ಥೆ ಮಾಡಿರುತ್ತಾರೆ |
| ಸಂಪರ್ಕಿಸಬೇಕಾದ ಸಂಖ್ಯೆ | ಶ್ರೀ ಎಂ. ಪ್ರಭಾಕರ್ ಭಟ್, ಎಸ್.ಒ.ಸಿ – 9448914540<br>ಶ್ರೀಮತಿ ಮಂಜುಳ. ಸಿ, ಎಸ್.ಒ.ಸಿ – 9482433516<br>ಶ್ರೀ. ಕಾರ್ತಿಕ್ ರಾಮಚಂದ್ರ, ರಾಜ್ಯ ಯುವ ಸಮಿತಿ ಅಧ್ಯಕ್ಷರು, ಭಾ.ಸ್ಕೌ.&ಗೈ – 9901029264 |

ಭಾಗವಹಿಸುವ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಇವರ ಪ್ರಯಾಣ ಭತ್ಯೆಯನ್ನು ಆಯಾಯ ಕಾಲೇಜಿನ ರೋವರ್ಸ್–ರೇಂಜರ್ಸ್ ನಿಧಿಯಿಂದ/ಜಿಲ್ಲಾ ಸಂಸ್ಥೆಯಿಂದ ಭರಿಸುವುದು. ತಮ್ಮ ಜಿಲ್ಲೆಯಲ್ಲಿ ನೇಮಕ ಮಾಡಿರುವ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ (ರೋವರ್–ರೇಂಜರ್) ಇವರುಗಳನ್ನು ನಿಯೋಜಿಸಲು ಕೋರಲಾಗಿದೆ. ಭಾಗವಹಿಸುವವರು ದಿನಾಂಕ: 06.05.2026ರ ಒಳಗಾಗಿ ರಾಜ್ಯ ಸಂಸ್ಥೆಗೆ ತಪ್ಪದೇ ಕಳುಹಿಸುವುದು. **ಈ ಸುತ್ತೋಲೆಯಲ್ಲಿ ಲಗತ್ತಿಸಿರುವ ಅರ್ಜಿ ನಮೂನೆಯನ್ನು ಸಂಬಂಧಪಟ್ಟ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳು ಭರ್ತಿ ಮಾಡಿ, ಸಮಾವೇಶಕ್ಕೆ ಬರುವಾಗ ಕಡ್ಡಾಯವಾಗಿ ತರುವುದು. ಈ ಸಮಾವೇಶವು ಬಹಳ ಮಹತ್ವದಾಗಿದ್ದು, ಜಿಲ್ಲಾ ಸಂಸ್ಥೆಯ ಅಭಿವೃದ್ಧಿಗೆ ಇವರುಗಳ ಪಾತ್ರ ಪ್ರಮುಖವಾಗಿರುತ್ತದೆ. ಆದ್ದರಿಂದ ತಾವು ಕಡ್ಡಾಯವಾಗಿ ಸಮಾವೇಶಕ್ಕೆ ಅಧ್ಯಕ್ಷರು ಮತ್ತು ಉಪಾಧ್ಯಕ್ಷರನ್ನು ನಿಯೋಜಿಸಲು ಆದ್ಯ ಗಮನಹರಿಸಿ, ಕ್ರಮವಹಿಸಬೇಕೆಂದು ಕೋರಲಾಗಿದೆ.**

**ವಿಶೇಷ ಸೂಚನೆ:–** ಈ ಸಮಿತಿಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳಿಗೆ ದಿನಾಂಕ:8.5.2026ರಂದು ಸಂಜೆ 5.00 ಗಂಟೆಗೆ ಪೂರ್ವಸಿದ್ಧತಾ ಸಭೆಯನ್ನು ಜೂಮ್ ಮೂಲಕ ಆಯೋಜಿಸಲಾಗುವುದು. ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಲಿಂಕ್‌ಅನ್ನು ಕಳುಹಿಸಿಕೊಡಲಾಗುವುದು.

ಸ್ಕೌಟ್–ಗೈಡ್ ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

(ಕೆ.ಗಂಗಪ್ಪ ಗೌಡ)
ರಾಜ್ಯ ಕಾರ್ಯದರ್ಶಿ

**ಪ್ರತಿ ಮಾಹಿತಿಗಾಗಿ:**

1. ರಾಜ್ಯ ಜಂಟಿ ಕಾರ್ಯದರ್ಶಿ (ಸ್ಕೌಟ್ಸ್)/(ಗೈಡ್ಸ್)
2. ವಾರ್ಡನ್, ಕೊಂಡಜ್ಜಿ ಬಸಪ್ಪ ಸ್ಕೌಟ್–ಗೈಡ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ, ಕೊಂಡಜ್ಜಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ
3. ಎ.ಎಸ್.ಒ.ಸಿ/ಡಿಒ/ಡಿಒಸಿ/ಡಿಒಟಿ/ಎಸ್‌ಜಿವಿ/ಎಸ್‌ಜಿಎಗಳು, ಭಾ.ಸ್ಕೌ&ಗೈ, ಇವರುಗಳ ಸೂಕ್ತ ಕ್ರಮಕ್ಕಾಗಿ